# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ.. ಕನ್ನಡ ವಾರಪತ್ರಿಕೆ

**ಸುಭಾಷಿತ:**

ನಾನೇ ದೊಡ್ಡವನೆಂಬ ಅಹಂಕಾರ ಬೇಡವೇ ಬೇಡ.
ಸಹನೆ ತಾಳ್ಮೆ ಇರುವವರು ದೇವರಿದ್ದಂತೆ,
ಕೋಪ ತಾಪ ಇರುವವರು ಶತ್ರುಗಳಂತೆ,
ಯೋಗಭಾಗ್ಯವ ಪಡೆದವರು ಯೋಗಿಗಳಂತೆ,
ಪಾಪಕರ್ಮದಿ ತೊಡಗಿದವರು ಪಾಪಿಗಳಂತೆ,
ನ್ಯಾಯನೀತಿಯಲ್ಲಿ ಸಾಗುವವರು ಮನುಜರಂತೆ,
ಸತ್ಯಧರ್ಮದಲ್ಲಿ ನಡೆದು ಬಾಳುವವರು
ಭೂಮಿ ಪುತ್ರರಂತೆ, ಕಂಡರೂ ಎಲ್ಲವನ್ನು
ಅರಿಯುವವನು ಭಗವಂತನೊಬ್ಬನೇ..
**ಭಗವಾನ್ ಶ್ರೀಕೃಷ್ಣ**



PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 12-06-2026 to 18-06-2026 ಬೆಲೆ:10-00 ಸಂಪುಟ–1 ಸಂಚಿಕೆ–37 ಪುಟಗಳು–6










ರಾತ್ರಿಯ ಪ್ರಯಾಣದಲ್ಲಿ 'ಹೈ–ಬೀಮ್' ಲೈಟ್ ಬಳಕೆಯಲ್ಲಿರಲಿ ಎಚ್ಚರ. ಕತ್ತಲೆಯಲ್ಲಿ ದಾರಿ ಕಾಣಲೆಂದು ನಾವು ಬಳಸುವ ಹೈ–ಬೀಮ್ ಲೈಟ್, ಎದುರಿನಿಂದ ಬರುವ ಚಾಲಕನ ಕಣ್ಣಿಗೆ ಬಿದ್ದಾಗ ಅವರು ಕ್ಷಣಾರ್ಧದಲ್ಲಿ ದೃಷ್ಟಿಹೀನತೆಗೆ ((Temporary Blindness) ಒಳಗಾಗುತ್ತಾರೆ. ಈ ಕೆಲವು ಸೆಕೆಂಡುಗಳ ಅಂಧತ್ವವು ಭೀಕರ ಅಪಘಾತಗಳಿಗೆ ಕಾರಣವಾಗಬಹುದು. ವಿಶೇಷವಾಗಿ ವಯಸ್ಸಾದವರು ಹಾಗೂ ದ್ವಿಚಕ್ರ ವಾಹನ ಸವಾರರು ಇಂತಹ ಬೆಳಕಿನಿಂದ ಗಾಬರಿಗೊಂಡು ವಾಹನದ ಮೇಲಿನ ನಿಯಂತ್ರಣ ಕಳೆದುಕೊಳ್ಳುವ ಸಾಧ್ಯತೆ ಹೆಚ್ಚು. ರಸ್ತೆ ಸಾರ್ವಜನಿಕ ಆಸ್ತಿ. ನಮ್ಮ ಬೆಳಕಿನಿಂದ ಬೇರೆಯವರಿಗೆ ತೊಂದರೆಯಾಗದಿರಲಿ ಎಂಬ ಸಣ್ಣ ಜವಾಬ್ದಾರಿ ದೊಡ್ಡ ಅಪಘಾತಗಳನ್ನು ತಡೆಯಬಲ್ಲದು. ಇಂದಿನಿಂದಲೇ ಜವಾಬ್ದಾರಿಯುತವಾಗಿ ವರ್ತಿಸೋಣ, ಎಲ್ಲರಿಗೂ ಸುರಕ್ಷಿತ ಪ್ರಯಾಣದ ವಾತಾವರಣವನ್ನು ನಿರ್ಮಿಸೋಣ. ನಮ್ಮ ಸುರಕ್ಷಿತ ಚಾಲನೆಯೇ ಎಲ್ಲರಿಗೂ ದಾರಿದೀಪವಾಗಲಿ.

## ಸ್ವಾಭಿಮಾನವನ್ನು ಯಾವತ್ತೂ ಬಿಟ್ಟುಕೊಟ್ಟಿಲ್ಲ –ಎಚ್ಡಿಡಿ



**ಬೆಂಗಳೂರು:** ನನ್ನ ರಾಜಕೀಯ ಜೀವನದಲ್ಲಿ ನಾನು ಯಾವತ್ತೂ ಸ್ವಾಭಿಮಾನವನ್ನು ಬಿಟ್ಟುಕೊಟ್ಟಿಲ್ಲ. ಯಾವುದೇ ಸಂಬಂಧವನ್ನು ಲಾಭದ ದೃಷ್ಟಿಯಿಂದ ನೋಡುವುದಿಲ್ಲ ಎಂದು ಮಾಜಿ ಪ್ರಧಾನಮಂತ್ರಿ ಎಚ್.ಡಿ. ದೇವೇಗೌಡ ಅವರು ಖಡಕ್ ಸಂದೇಶ ನೀಡಿದರು. ನಗರದ ಜೆಪಿ ಭವನದಲ್ಲಿ ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ತಮ್ಮ ಸಂಬಂಧವು ಯಾವುದೇ ರಾಜಕೀಯ ಲಾಭಕ್ಕಾಗಿ ಅಲ್ಲ ಎಂದು ಸ್ಪಷ್ಟಪಡಿಸಿದರು. "ನಮ್ಮ ನಡುವೆ **3ನೇ ಪುಟಕ್ಕೆ**

## ಅಗ್ರಸ್ಥಾನದಲ್ಲಿ ಮೋದಿ: ದಾಖಲೆಯ ನಾಯಕ

**ನವದೆಹಲಿ:** ಭಾರತೀಯ ರಾಜಕೀಯ ಇತಿಹಾಸದಲ್ಲಿ ಇಂದೊಂದು ಸುವರ್ಣಾಧ್ಯಾಯ. ಜೂನ್ 10, 2026ರ ಈ ದಿನ, ಪ್ರಧಾನಿ ನರೇಂದ್ರ ಮೋದಿ ಅವರು ದೇಶದ ಸುದೀರ್ಘಕಾಲ ಸೇವೆ ಸಲ್ಲಿಸಿದ ಚುನಾಯಿತ ಪ್ರಧಾನಿ ಎಂಬ ಇತಿಹಾಸದ ಪುಟಗಳಲ್ಲಿ ಅಜರಾಮರರಾಗಿದ್ದಾರೆ. ದಶಕಗಳ ಕಾಲದ ರಾಜಕೀಯ ಮೇರು ಪರ್ವತದಂತೆ ನಿಂತಿದ್ದ ಪಂಡಿತ್ ಜವಾಹರಲಾಲ್ ನೆಹರೂ ಅವರ ದಾಖಲೆಯನ್ನು ಮೀರಿ, ಮೋದಿ ಅವರು ಭಾರತದ ಆಡಳಿತ ಚುಕ್ಕಾಣಿಯಲ್ಲಿ ಅತಿ ಹೆಚ್ಚು ಕಾಲದ ದಾಖಲೆಯನ್ನು ತನ್ನದಾಗಿಸಿಕೊಂಡಿದ್ದಾರೆ. 2014ರಲ್ಲಿ ದೇಶದ ಚುಕ್ಕಾಣಿ ಹಿಡಿದಾಗಿನಿಂದಲೂ, 'ಸಬ್ ಕಾ ಸಾಥ್, ಸಬ್ ಕಾ ವಿಕಾಸ್' ಎಂಬ ಮಂತ್ರವನ್ನು ಪಾಲಿಸುತ್ತಾ ಬಂದಿರುವ ಮೋದಿ, ಆಡಳಿತದಲ್ಲಿ **3ನೇ ಪುಟಕ್ಕೆ**



## ಕಸ ಮಾಫಿಯಾ ಗ್ಯಾಂಗಿನ ಏಜೆಂಟ್ ಆಗಿ ಮಾತನಾಡುತ್ತಿದ್ದಾರೆ –ಡಿ.ಕೆ.ಶಿ

ವಿರೋಧ ಪಕ್ಷದ ನಾಯಕರಾದ ಆರ್. ಅಶೋಕ್ ಅವರು ಬೆಂಗಳೂರು ಕಸ ಮಾಫಿಯಾ ಗ್ಯಾಂಗಿನ ಏಜೆಂಟರಾಗಿ ಮಾತನಾಡುತ್ತಿದ್ದಾರೆ. ಈ ಮಾಫಿಯಾ ನಿಯಂತ್ರಿಸಬೇಕು ಎಂದು ನಾನು ಈ ಹಿಂದೆ ಅವರೊಂದಿಗೆ ಚರ್ಚೆ ಮಾಡಿದ್ದೆ. ಈಗ ಅಶೋಕ್ ಅವರು ಮಾಫಿಯಾದ ವಕ್ತಾರರಾಗಿರುವುದು ನನಗೆ ಆಶ್ಚರ್ಯವಾಗಿದೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ತಿರುಗೇಟು ನೀಡಿದರು. ದಿಲ್ಲಿಯಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಬುಧವಾರ ಪ್ರತಿಕ್ರಿಯೆ ನೀಡಿ, ಕಸದ **3ನೇ ಪುಟಕ್ಕೆ**








# ಸುದ್ದಿ ತುಣುಕು

ಸಾರ್ವಜನಿಕ ಹಿತಾಸಕ್ತಿ ಇಲ್ಲದ ವೈಯಕ್ತಿಕ ಮಾಹಿತಿಗಳನ್ನು ಆರ್‌ಟಿಐ ಕಾಯ್ದೆಯ ಸೆಕ್ಷನ್ 8(1)(ಜೆ) ಅಡಿಯಲ್ಲಿ ವಿನಾಯಿತಿ ನೀಡಲಾಗಿದ್ದು, ಇಂತಹ ಮಾಹಿತಿಗಳನ್ನು ಒದಗಿಸುವಂತೆ ಒತ್ತಾಯಿಸುವುದಕ್ಕೆ ಕಾನೂನಿನಲ್ಲಿ ಅವಕಾಶವಿಲ್ಲ ಎಂದು ನ್ಯಾಯಪೀಠ ತಿಳಿಸಿದೆ.

ನರೇಂದ್ರ ಮೋದಿಯವರು ಪ್ರಧಾನಮಂತ್ರಿ ಆಗಿ 12 ವರ್ಷಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ ಬಿಜೆಪಿ ನಾಯಕರು ಮತ್ತು ಕಾರ್ಯಕರ್ತರು ರಾಜ್ಯದ ಹಲವೆಡೆ ವಿಶೇಷ ಪೂಜೆ ಸಲ್ಲಿಸಿ ಸಂಭ್ರಮಾಚರಿಸಿದರು.

ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರಿನ ಬಿಜೆಪಿ ಮುಖಂಡನ ಪುತ್ರ ಕೃಷ್ಣಾ ರಾವ್ ವಿರುದ್ಧದ ಅತ್ಯಾಚಾರ ಪ್ರಕರಣವನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸುವ ಪ್ರಸ್ತಾಪವನ್ನು ವಕೀಲರು ಹೈಕೋರ್ಟ್ ಮುಂದಿಟ್ಟಿದ್ದಾರೆ.

ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿಗಳಿಗೆ ಮಂಜೂರಾಗಿದ್ದ ಜಾಮೀನು ರದ್ದುಗೊಳಿಸಲು ಹೈಕೋರ್ಟ್ ನಿರಾಕರಿಸಿದೆ.

ಮುಂದಿನ ನೂರು ದಿನಗಳಲ್ಲಿ ಕೆಐಎಡಿಬಿ ಸಂಪೂರ್ಣವಾಗಿ ಡಿಜಿಟಲೀಕರಣ ಆಗಬೇಕು ಎಂದು ಅಧಿಕಾರಿಗಳಿಗೆ ಸಚಿವ ಎಂ.ಬಿ. ಪಾಟೀಲ್ ಗಡುವು ನೀಡಿದ್ದಾರೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ದೆಹಲಿಯಲ್ಲಿ ಕೇಂದ್ರ ವಸತಿ ಮತ್ತು ನಗರಾಭಿವೃದ್ಧಿ ಸಚಿವ ಮನೋಹರ್ ಲಾಲ್ ಖಟ್ಟರ್ ಅವರನ್ನು ಭೇಟಿ ಮಾಡಿದರು.

ಹಗಲಿನ ವೇಳೆ ಕಡಿಮೆ ದರಕ್ಕೆ ವಿದ್ಯುತ್ ಖರೀದಿಸಿ, ರಾತ್ರಿ ವೇಳೆ ಜಲ ಮತ್ತು ಉಷ್ಣ ವಿದ್ಯುತ್ ಸ್ಥಾವರಗಳಲ್ಲಿ ವಿದ್ಯುತ್ ಉತ್ಪಾದಿಸಿ ಹೆಚ್ಚಿನ ಬೆಲೆಗೆ ಮಾರಾಟ ಮಾಡಲಾಗಿದೆ ಎಂದು ಸಚಿವ ಕೆ.ಜೆ.ಜಾರ್ಜ್ ಮಾಹಿತಿ ನೀಡಿದರು.

ಸರಣಿ ಮನೆ ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾದ 'TATTO 313' ಗ್ಯಾಂಗ್‌ನ ಇಬ್ಬರು ಆರೋಪಿಗಳನ್ನು ಉಡುಪಿ ಪೊಲೀಸರು ಬಂಧಿಸಿದ್ದಾರೆ.

ವಾಹನಕ್ಕೆ ದಾರಿ ಕೊಡುವ ವಿಚಾರವಾಗಿ ಸ್ಥಳೀಯ ವ್ಯಕ್ತಿ ಹಾಗೂ ತೆಲಂಗಾಣ ಪ್ರವಾಸಿಗರ ನಡುವೆ ನಡೆದ ಗಲಾಟೆ ಸಂಬಂಧ ಉಡುಪಿ ನಗರ ಪೊಲೀಸ್ ಠಾಣೆಯಲ್ಲಿ ಕೇಸ್ ಮತ್ತು ಕೌಂಟರ್ ಕೇಸ್ ದಾಖಲಾಗಿದೆ.

ಬೀದಿನಾಯಿಗಳ ಹಾವಳಿ ಹೆಚ್ಚಾಗಿದ್ದು ನಾಯಿಗಳ ಸಂಖ್ಯೆಗೆ ಕಡಿವಾಣ ಹಾಕುವುದು ಅವಶ್ಯವಾಗಿದೆ. ಹೀಗಾಗಿ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಶಿವಳ್ಳಿ ಬಳಿ ರಾಜ್ಯದಲ್ಲಿಯೇ ಪ್ರಥಮ ಹೈಟೆಕ್ ಸಂತಾನಶಕ್ತಿ ಹರಣ ಶಸ್ತ್ರಚಿಕಿತ್ಸೆ ಕೇಂದ್ರವನ್ನು ಸ್ಥಾಪಿಸಿದೆ.

ಕೆಎಲ್‌ಇ ಡೀಮ್ಡ್ ವಿಶ್ವವಿದ್ಯಾಲಯದ ಆವರಣದಲ್ಲಿ 1 ಗಂಟೆ 15 ನಿಮಿಷಗಳ ಕಾಲ ವಿಶ್ವಗುರು ಬಸವಣ್ಣನ 34 ವಚನಗಳು ಸಾವಿರ ಕಂಠಗಳಿಂದ ಮೊಳಗಿದವು.

ಮಧ್ಯಪ್ರದೇಶದ ರಾಜ್ಯಸಭಾ ಚುನಾವಣೆಗೆ ಕಾಂಗ್ರೆಸ್ ಅಭ್ಯರ್ಥಿಯಾಗಿದ್ದ ಮೀನಾಕ್ಷಿ ನಟರಾಜನ್ ಅವರ ನಾಮಪತ್ರ ತಿರಸ್ಕೃತಗೊಂಡ ಬಗ್ಗೆ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಬಿಜೆಪಿ ವಿರುದ್ಧ ಕಿಡಿಕಾರಿದ್ದಾರೆ.

ವಿಡಿಯೋ ಕಾನ್ಫರೆನ್ಸ್ ಮೂಲಕ ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವರ ಸಭೆಯಲ್ಲಿ ಭಾಗಿಯಾದ ಸಚಿವ ಈಶ್ವರ ಖಂಡ್ರೆ ಅವರು ವಿಜಿ ರಾಮ್ ಜಿಯ ಕನಿಷ್ಠ ವೇತನ ಹೆಚ್ಚಳಕ್ಕೆ ಕೇಂದ್ರ ಸಚಿವರಲ್ಲಿ ಮನವಿ ಮಾಡಿದ್ದಾರೆ.

ಹೆಚ್.ಡಿ. ದೇವೇಗೌಡರ ಮೇಲೆ ಕಾಂಗ್ರೆಸ್ ಅತಿಯಾದ ಅನುಕಂಪ ತೋರಿಸುತ್ತಿದೆ, ಜೆಡಿಎಸ್ ಮತ್ತು ಬಿಜೆಪಿ ನಡುವಿನ ಮೈತ್ರಿಯಲ್ಲಿ ಬಿರುಕು ಸೃಷ್ಟಿಸಲು ಷಡ್ಯಂತ್ರ ನಡೆಸುತ್ತಿದೆ ಎಂದು ಹೆಚ್‌ಡಿಕೆ ಆರೋಪಿಸಿದ್ದಾರೆ.

# ಮೆಂತ್ಯ ಮಣ್ಣಿ



**ಬೇಕಾಗುವ ಸಾಮಗ್ರಿಗಳು :**
ನೆನೆಸಿದ ಮೆಂತ್ಯ : 3 ಚಮಚ
ನೆನೆಸಿದ ಅಕ್ಕಿ : 1 ಕಪ್
ಬೆಲ್ಲ : 1.5 ಕಪ್
ತೆಂಗಿನ ತುರಿ : 1 ಕಪ್
ಏಲಕ್ಕಿ ಪುಡಿ : ಅರ್ಧ ಚಮಚ
ತುಪ್ಪ : 2 ಚಮಚ
ಉಪ್ಪು : ಚಿಟಿಕೆ

**ತಯಾರಿಸುವ ವಿಧಾನ :**
ನೆನೆಸಿಟ್ಟ ಮೆಂತ್ಯ ಮತ್ತು ಅಕ್ಕಿಯನ್ನು ಮಿಕ್ಸಿ ಜಾರ್‌ಗೆ ಹಾಕಿ, ಅದಕ್ಕೆ ತುರಿದ ತೆಂಗಿನಕಾಯಿ ಸೇರಿಸಿ ನುಣ್ಣಗೆ ರುಬ್ಬಿಕೊಳ್ಳಿ. ಒಂದು ದಪ್ಪ ತಳದ ಪಾತ್ರೆಗೆ ಬೆಲ್ಲ ಮತ್ತು ಸ್ವಲ್ಪ ನೀರು ಹಾಕಿ ಕರಗಿಸಿ, ಸೋಸಿಕೊಳ್ಳಿ. ಸೋಸಿದ ಬೆಲ್ಲದ ನೀರನ್ನು ಮತ್ತೆ ಒಲೆಯ ಮೇಲಿಟ್ಟು ಕುದಿಸಿ. ಕುದಿಯುತ್ತಿರುವಾಗ ರುಬ್ಬಿದ ಮಿಶ್ರಣವನ್ನು ನಿಧಾನವಾಗಿ ಸುರಿಯುತ್ತಾ ಕೈಯಾಡಿಸುತ್ತಿರಿ. ಮಿಶ್ರಣವು ದಪ್ಪವಾಗುತ್ತಾ ಬರುತ್ತಿದ್ದಂತೆ ಈ ಚಿಟಿಕೆ ಉಪ್ಪು ಮತ್ತು ಏಲಕ್ಕಿ ಪುಡಿಯನ್ನು ಸೇರಿಸಿ. ಕೈ ಬಿಡದಂತೆ ಸಣ್ಣ ಉರಿಯಲ್ಲಿ ತಿರುಗಿಸುತ್ತಿರಿ, ಇಲ್ಲವಾದರೆ ತಳ ಹಿಡಿಯುವ ಸಾಧ್ಯತೆ ಇರುತ್ತದೆ. ಮಿಶ್ರಣವು ಪಾತ್ರೆಯ ಅಂಚನ್ನು ಬಿಡಲು ಪ್ರಾರಂಭಿಸಿದಾಗ, 2 ಚಮಚ ತುಪ್ಪ ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ, ಒಂದು ಬಟ್ಟಲಿಗೆ ತುಪ್ಪ ಸವರಿ, ಅದಕ್ಕೆ ಹಾಕಿ ತಣ್ಣಗಾದ ನಂತರ ನಮಗೆ ಬೇಕಾದ ಆಕಾರಕ್ಕೆ ಕತ್ತರಿಸಿಕೊಂಡರೆ ರುಚಿಕರವಾದ ಮತ್ತು ಆರೋಗ್ಯಕರವಾದ ಮೆಂತ್ಯ ಮಣ್ಣಿ ಸವಿಯಲು ಸಿದ್ಧ.

# ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಮಾನವ ಹಕ್ಕುಗಳ ಉಲ್ಲಂಘನೆ!



ಇಸ್ಲಾಮಬಾದ್ : ಮಾನವ ಹಕ್ಕುಗಳ ಉಲ್ಲಂಘನೆ, ಗಗನಕ್ಕೇರುತ್ತಿರುವ ಹಣದುಬ್ಬರ, ನಿರುದ್ಯೋಗ ಮತ್ತು ತೀವ್ರ ಆರ್ಥಿಕ ಸಂಕಷ್ಟದ ವಿರುದ್ಧ ಜಂಟಿ ಅವಾಮಿ ಕ್ರಿಯಾ ಸಮಿತಿ (ಜೆಎಎಸಿ) ಪಾಕಿಸ್ತಾನ ಆಕ್ರಮಿತ ಜಮ್ಮು ಮತ್ತು ಕಾಶ್ಮೀರದಲ್ಲಿ (ಪಿಒಕೆ) ನಡೆಸುತ್ತಿರುವ ಆಂದೋಲನವು ತೀವ್ರ ಸ್ವರೂಪ ಪಡೆದುಕೊಂಡಿದೆ. ಈ ಪ್ರದೇಶದಲ್ಲಿ ದೊಡ್ಡ ಪ್ರಮಾಣದ ರಕ್ತಪಾತ ನಡೆದಿದ್ದು, ಪ್ರತಿಭಟನೆಯನ್ನು ಹತ್ತಿಕ್ಕಲು ಪಾಕಿಸ್ತಾನ ಪಡೆಗಳು ಕಠಿಣ ಹಾಗೂ ಹಿಂಸಾತ್ಮಕ ಕ್ರಮಗಳನ್ನು ಕೈಗೊಂಡಿವೆ. ಈ ಭೀಕರ ಹಿಂಸಾಚಾರದ ಕುರಿತು ತನಿಖೆ ನಡೆಸುವಂತೆ ಈಗ ಅಂತಾರಾಷ್ಟ್ರೀಯ ಸಮುದಾಯಗಳು ತೀವ್ರ ಒತ್ತಾಯ ಹೇರಲಾರಂಭಿಸಿವೆ.

# ಅಮೆರಿಕದ H-1B ವೀಸಾ : ಟ್ರಂಪ್ ನಿಯಮಕ್ಕೆ ತಡೆ

ಅಮೆರಿಕ : ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು H-1B ವೀಸಾ ಅರ್ಜಿಗಳಿಗಾಗಿ ವಿಧಿಸಿದ್ದ 1 ಲಕ್ಷ ಅಮೆರಿಕನ್ ಡಾಲರ್ (USD 100,000) ಭಾರಿ ಪ್ರಕ್ರಿಯೆ ಶುಲ್ಕವನ್ನು ಅಮೆರಿಕದ ಫೆಡರಲ್ ನ್ಯಾಯಾಧೀಶರು ರದ್ದುಗೊಳಿಸಿದ್ದಾರೆ. ಈ ಆದೇಶಕ್ಕೆ ದೇಶದ ಸಂಸತ್ತು ಆದ ಕಾಂಗ್ರೆಸ್‌ನ ಕಡ್ಡಾಯ ಅನುಮೋದನೆ ಇಲ್ಲದ ಕಾರಣ, ಅಧ್ಯಕ್ಷರ ಈ ಕ್ರಮ ಸಂಪೂರ್ಣ ಕಾನೂನು ಬಾಹಿರ ಎಂದು ಜಡ್ಜ್ ಸಷ್ಟಪಡಿಸಿದ್ದಾರೆ. ಬೋಸ್ಟನ್‌ನ ಜಿಲ್ಲಾ ನ್ಯಾಯಾಲಯದ ನ್ಯಾಯಾಧೀಶ ಲಿಯೋ ಸೊರೊಕಿನ್ ಅವರು




ಈ ಮಹತ್ವದ ತೀರ್ಪು ನೀಡುವ ಮೂಲಕ ಟ್ರಂಪ್ ಅವರ ಕಟ್ಟುನಿಟ್ಟಿನ ವೀಸಾ ನೀತಿಯನ್ನು ವಜಾಗೊಳಿಸಿದ್ದಾರೆ.

# ಇಸ್ರೇಲ್‌ನಲ್ಲಿ ಛತ್ರಪತಿ ಶಿವಾಜಿ ಪ್ರತಿಮೆ



ಟೆಲ್ ಅವಿವ್ : ಭಾರತ ಮತ್ತು ಇಸ್ರೇಲ್ ನಡುವೆ ದಿನೇದಿನೆ ಬೆಳೆಯುತ್ತಿರುವ ರಾಜತಾಂತ್ರಿಕ ಹಾಗೂ ಸಾಂಸ್ಕೃತಿಕ ಸಂಬಂಧಗಳಿಗೆ ಮತ್ತೊಂದು ಐತಿಹಾಸಿಕ ಗರಿ ಸೇರ್ಪಡೆಯಾಗಿದೆ. ಇಸ್ರೇಲ್ ದೇಶದ ಪ್ರಮುಖ ನಗರವೊಂದರಲ್ಲಿ ಮರಾಠ ಸಾಮ್ರಾಜ್ಯದ ಹೆಮ್ಮೆಯ ಸಂಸ್ಥಾಪಕ ಛತ್ರಪತಿ ಶಿವಾಜಿ ಮಹಾರಾಜರ ಭವ್ಯ ಪ್ರತಿಮೆಯನ್ನು ಸ್ಥಾಪಿಸಲು ಇಸ್ರೇಲ್ ಸರ್ಕಾರ ನಿರ್ಧರಿಸಿದೆ. 'ಶಿವರಾಜ್ಯಾಭಿಷೇಕ ದಿನ'ದ ಶುಭ ಸಂದರ್ಭದಲ್ಲಿ ಮುಂಬೈನಲ್ಲಿರುವ ಇಸ್ರೇಲ್‌ನ ಕಾನ್ಸುಲ್ ಜನರಲ್ ಯಾನಿವ್ ರೇವಾಚ್ ಈ ಮಹತ್ವದ ಘೋಷಣೆಯನ್ನು ಅಧಿಕೃತವಾಗಿ ಹೊರಡಿಸಿದ್ದಾರೆ.

# ಕದನ ವಿರಾಮಕ್ಕೆ ಡೊನಾಲ್ಡ್ ಟ್ರಂಪ್ ಕರೆ

ಇರಾನ್ : ಏಪ್ರಿಲ್‌ನಲ್ಲಿ ಕದನ ವಿರಾಮ ಜಾರಿಗೆ ಬಂದ ನಂತರ ಇಸ್ರೇಲ್ ಮತ್ತು ಇರಾನ್ ನಡುವೆ ಮತ್ತೆ ಭುಗಿಲೆದ್ದಿದ್ದ ಕ್ಷಿಪಣಿ ದಾಳಿಗಳ ಸರಣಿಗೆ ಸದ್ಯಕ್ಕೆ ಬ್ರೇಕ್ ಬಿದ್ದಿದೆ. ಇಸ್ರೇಲ್ ವಿರುದ್ಧದ ತನ್ನ ಸಶಸ್ತ್ರ ಪಡೆಗಳ ಕಾರ್ಯಾಚರಣೆಯನ್ನು ತಾತ್ಕಾಲಿಕವಾಗಿ ನಿಲ್ಲಿಸುವುದಾಗಿ ಇರಾನ್ ಅಧಿಕೃತವಾಗಿ ಘೋಷಿಸಿದೆ. ಇರಾನ್‌ನ ಖತಮ್ ಅಲ್-ಅನ್ಬಿಯಾ ಕಮಾಂಡ್ ಅಲ್ಲಿನ ದೂರದರ್ಶನಕ್ಕೆ ನೀಡಿರುವ ಹೇಳಿಕೆಯಲ್ಲಿ, ಇಸ್ರೇಲ್ ತನಗಾಗಿಸಿದ ನೋವಿಗೆ ತಕ್ಕ



ಪ್ರತಿಕ್ರಿಯೆ ನೀಡಲಾಗಿದ್ದು, ಕಾರ್ಯಾಚರಣೆಯನ್ನು ನಿಲ್ಲಿಸಲಾಗುತ್ತಿದೆ ಎಂದು ತಿಳಿಸಿದೆ.

# ಸಂದರ್ಶನದಿಂದ ಮಧ್ಯದಲ್ಲೇ ಹೊರನಡೆದ ಟ್ರಂಪ್.!



ವಾಷಿಂಗ್ಟನ್ : ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಪ್ರಮುಖ ಸುದ್ದಿ ಸಂಸ್ಥೆಯೊಂದರ ಸಂದರ್ಶನದ ವೇಳೆ ಮಹಿಳಾ ನಿರೂಪಕಿಯೊಂದಿಗೆ ತೀವ್ರ ವಾಗ್ವಾದ ನಡೆಸಿ, ಕೋಪದಿಂದ ಮಧ್ಯದಲ್ಲೇ ಹೊರನಡೆದಿರುವ ಘಟನೆ ನಡೆದಿದೆ. ಸಂದರ್ಶನವನ್ನು ಟ್ರಂಪ್ ಹಠಾತ್ತನೆ ಕೊನೆಗೊಳಿಸಿದ್ದಾರೆ. ನಿರೂಪಕಿ ಕ್ರಿಸ್ಟನ್ ವೆಲ್ಕರ್ ಅವರು ಚುನಾವಣಾ ವಂಚನೆಯ ಹೇಳಿಕೆಗಳನ್ನು ತಿರಸ್ಕರಿಸಿ, ನಿಮ್ಮ ಆರೋಪಗಳಿಗೆ ಸೂಕ್ತ ಪುರಾವೆಗಳನ್ನು ಒದಗಿಸುವಂತೆ ಪದೇ ಪದೇ ಒತ್ತಾಯಿಸಿದರು. ಇದರಿಂದ ಟ್ರಂಪ್ ತೀವ್ರ ಹತಾಶೆ ಮತ್ತು ಆಕ್ರೋಶಕ್ಕೆ ಒಳಗಾದರು.

# ಅಲೆಕ್ಸಾಂಡರ್ಜ್ವೆರೆವ್‌ಗೆ ಚೊಚ್ಚಲ ಗ್ರಾನ್ ಸ್ಲಾಮ್

ಪ್ಯಾರಿಸ್ : ಇಲ್ಲಿ ನಡೆದ ರೋಚಕ ಐದು ಸೆಟ್‌ಗಳ ಫ್ರೆಂಚ್ ಓಪನ್ ಪುರುಷರ ಸಿಂಗಲ್ಸ್ ವಿಭಾಗದ ಫೈನಲ್ ಪಂದ್ಯದಲ್ಲಿ ಜರ್ಮನಿಯ ಅಲೆಕ್ಸಾಂಡರ್ ಜ್ವೆರೆವ್ ಅವರು ಇಟಲಿಯ ಫ್ಲಾವಿಯೊ ಕೊಬೊಲ್ಲಿ ಅವರನ್ನು ಮಣಿಸಿ ಚಾಂಪಿಯನ್ ಆಗಿ ಹೊರಹೊಮ್ಮಿದ್ದಾರೆ. ಭಾನುವಾರ ನಡೆದ ಈ ಪ್ರತಿಷ್ಠಿತ ಹಾಗೂ ತೀವ್ರ ಕುತೂಹಲ ಕೆರಳಿಸಿದ್ದ ಕಾದಾಟದಲ್ಲಿ ಜ್ವೆರೆವ್ 6-1, 4-6, 6-4, 6-7 (5/7),



6-1 ಸೆಟ್‌ಗಳ ಅಂತರದಿಂದ ಅದ್ಭುತ ಜಯ ಸಾಧಿಸಿದರು.

# ಏಷ್ಯಾ ಕಪ್ ಅಂಡರ್-18 ಹಾಕಿ: ಭಾರತ ಚಾಂಪಿಯನ್



ಚೆನ್ನೈ : ಪುರುಷರ ಹಾಕಿ ಅಂಡರ್-18 ಏಶ್ಯಾಕಪ್ ಟೂರ್ನಿಯಲ್ಲಿ ಭಾರತ ತಂಡವು ಭರ್ಜರಿ ಪ್ರದರ್ಶನ ನೀಡುವ ಮೂಲಕ ಐತಿಹಾಸಿಕ ಸಾಧನೆ ಮಾಡಿದೆ. ರೋಚಕ ಫೈನಲ್ ಪಂದ್ಯದಲ್ಲಿ ಜಪಾನ್ ತಂಡವನ್ನು 4-1 ಗೋಲುಗಳ ಅಂತರದಿಂದ ಮಣಿಸಿದ ಭಾರತ ಪುರುಷರ ತಂಡವು, ದಾಖಲೆಯ ಮೂರನೇ ಬಾರಿಗೆ ಚಾಂಪಿಯನ್ ಪಟ್ಟವನ್ನು ಅಲಂಕರಿಸಿದೆ. ಭಾರತೀಯ ಮಹಿಳೆಯರ ಅಂಡರ್-18 ಹಾಕಿ ತಂಡವು ದಕ್ಷಿಣ ಕೊರಿಯಾ ತಂಡವನ್ನು 3-0 ಗೋಲುಗಳ ಅಂತರದಿಂದ ಮಣಿಸಿ ಕಂಚಿನ ಪದಕವನ್ನು ತನ್ನದಾಗಿಸಿಕೊಂಡಿದೆ.

# ಸೋತು ಹೊರಬಿದ್ದ ಪಿ.ವಿ. ಸಿಂಧು

ಜಕಾರ್ತ : ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತೆ ಭಾರತದ ತಾರೆ ಪಿ.ವಿ. ಸಿಂಧು ಅವರು ಇಲ್ಲಿ ನಡೆಯುತ್ತಿರುವ ಇಂಡೋನೇಷ್ಯಾ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯಿಂದ ಹೊರಬಿದ್ದಿದ್ದಾರೆ. ಗುರುವಾರ ನಡೆದ ಮಹಿಳಾ ಸಿಂಗಲ್ಸ್‌ನ ಪ್ರಿಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಸಿಂಧು ಅವರು ವಿಶ್ವದ ನಂ. 1 ಆಟಗಾರ್ತಿ, ದಕ್ಷಿಣ ಕೊರಿಯಾದ ಆನ್ ಸೆ ಯಂಗ್ ವಿರುದ್ಧ 21-17, 21-14 ಗೇಮ್‌ಗಳಿಂದ ಸೋಲೊಪ್ಪಿಕೊಂಡರು. ಕಳೆದ ಎರಡು ವಾರಗ



ಳಲ್ಲಿ ಆನ್‌ಸೆಯಂಗ್ ವಿರುದ್ಧ ಸಿಂಧು ಅನುಭವಿಸುತ್ತಿರುವ ಎರಡನೇ ಸೋಲು ಇದಾಗಿದೆ.

# ಕಾಂಗ್ರೆಸ್ ಒಳಗಿನ ಅಸಮಾಧಾನ ಸರ್ಕಾರಕ್ಕೆ ಸವಾಲಾಗಲಿದೆ: ಸಿ.ಟಿ. ರವಿ



ಚಿಕ್ಕಮಗಳೂರು : ರಾಜ್ಯ ಸರ್ಕಾರದ ಮುಂದೆ ಸದ್ಯಕ್ಕೆ ಆರ್ಥಿಕ ಪರಿಸ್ಥಿತಿ, ಸಚಿವ ಸಂಪುಟದೊಳಗಿನ ಅಸಮಾಧಾನ ಹಾಗೂ ಅಭಿವೃದ್ಧಿಯ ಆದ್ಯತೆಗಳಂತಹ ಹಲವು ಪ್ರಮುಖ ಸವಾಲುಗಳಿವೆ ಎಂದು ಕರ್ನಾಟಕ ವಿಧಾನ ಪರಿಷತ್ ಸದಸ್ಯರಾದ ಡಾ. ಸಿ.ಟಿ. ರವಿ ಅವರು ತಿಳಿಸಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ತಮ್ಮ ಆಡಳಿತ ಅನುಭವ ಮತ್ತು ಕಾರ್ಯಕ್ಷಮತೆಯನ್ನು ಸಮರ್ಪಕವಾಗಿ ಬಳಸಿಕೊಂಡು ರಾಜ್ಯದ ಅಭಿವೃದ್ಧಿಗೆ ಆದ್ಯತೆ ನೀಡುವ ಇಚ್ಛಾಶಕ್ತಿಯನ್ನು ಪ್ರದರ್ಶಿಸಬೇಕಿದೆ, ರಾಜ್ಯದಲ್ಲಿ ಇನ್ನೂ ಪೂರ್ಣ ಪ್ರಮಾಣದ ಸಚಿವ ಸಂಪುಟ ರಚನೆಯಾಗಿಲ್ಲ ಎಂದು ಅವರು ಅಭಿಪ್ರಾಯಪಟ್ಟರು.

# ಜೆಡಿಎಸ್ ಕಾರ್ಯಕರ್ತರಿಗೆ ಡಿಸಿಎಂ ಡಿ.ಕೆ.ಶಿ ಮುಕ್ತ ಆಹ್ವಾನ

ಬೆಂಗಳೂರು : ರಾಜ್ಯ ರಾಜಕಾರಣದಲ್ಲಿ ಮತ್ತೊಂದು ಅತ್ಯಂತ ಕುತೂಹಲಕಾರಿ ವಿದ್ಯಮಾನ ಜರುಗಿದ್ದು, ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರು ಜೆ.ಡಿ.ಎಸ್. ಕಾರ್ಯಕರ್ತರಿಗೆ ಬಹಿರಂಗವಾಗಿಯೇ ಮುಕ್ತ ಆಹ್ವಾನ ನೀಡಿದ್ದಾರೆ. ಈ ಡಿ. ಕೆ. ಶಿವಕುಮಾರ್ ಬರೀ



ಕಾಂಗ್ರೆಸ್ ಪಕ್ಷಕ್ಕೆ ಮಾತ್ರ ಸೀಮಿತನಲ್ಲ, ನಮಗೂ ಕೂಡ ಈ ಡಿ.ಕೆ. ಶಿವಕುಮಾರ್ ಇದ್ದಾನೆ ಎನ್ನುವುದನ್ನು ಮರೆಯಬೇಡಿ ಎಂದು ಭರವಸೆ ನೀಡುವ ಮೂಲಕ ತಾವು ಕೇವಲ ಒಂದು ಪಕ್ಷದ ನಾಯಕನಲ್ಲ, ಇಡೀ ಪ್ರಾಂತದ ಜನರ ನಾಯಕ ಎಂಬ ಬಲವಾದ ಸಂದೇಶವನ್ನು ರವಾನಿಸಿದರು.

# ದೇವೇಗೌಡರಿಗೆ ತಪ್ಪಿದ ರಾಜ್ಯಸಭಾ ಟಿಕೆಟ್: ಹೆಚ್.ಡಿ.ಕೆ. ತಿರುಗೇಟು

ಮಂಡ್ಯ : ರಾಜ್ಯಸಭಾ ಚುನಾವಣೆಗೆ ಎನ್‌ಡಿಎ ಅಭ್ಯರ್ಥಿಯಾಗಿ ಒಬಿಸಿ ನಾಯಕ ಪ್ರೊ. ಎಂ. ನಾಗರಾಜ ಅವರ ಹೆಸರನ್ನು ಬಿಜೆಪಿ ಅಧಿಕೃತವಾಗಿ ಪ್ರಕಟಿಸಿದ ಬೆನ್ನಲ್ಲೇ ಕರ್ನಾಟಕ ರಾಜಕಾರಣದಲ್ಲಿ ಹೊಸ ವಾಗ್ದಾಳಿ ಆರಂಭವಾಗಿದೆ. ಮಾಜಿ ಪ್ರಧಾನ ಹೆಚ್.ಡಿ. ದೇವೇಗೌಡ ಅವರಿಗೆ ಟಿಕೆಟ್ ಕೈತಪ್ಪಿದೆ ಎಂದು ಕಾಂಗ್ರೆಸ್ ನಾಯಕರು ಬಿಜೆಪಿ ಹಾಗೂ ಜೆಡಿಎಸ್ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದರು. ಆದರೆ, ಮಂಡ್ಯ ತಾಲೂಕಿನ ತಗ್ಗಹಳ್ಳಿಯಲ್ಲಿ ಮಾತನಾಡಿರುವ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಈ ಎಲ್ಲ ಊಹಾಪೋಹಗಳಿಗೆ ಮತ್ತು ಕಾಂಗ್ರೆಸ್ ಆರೋಪಗಳಿಗೆ ಸ್ಪಷ್ಟನೆ ನೀಡುವ ಮೂಲಕ ತಿರುಗೇಟು ನೀಡಿದ್ದಾರೆ.



# ಬೆಂಗಳೂರು ಗಡಿಭಾಗದಲ್ಲಿ ಭಾರಿ ಪ್ರಮಾಣದ ಸ್ಫೋಟಕ ಪತ್ತೆ !

ಬೆಂಗಳೂರು : ಸಿಲಿಕಾನ್ ಸಿಟಿ ಬೆಂಗಳೂರಿನ ಗಡಿಭಾಗದಲ್ಲಿ ಭಾರಿ ಪ್ರಮಾಣದ ಸ್ಫೋಟಕಗಳು ಪತ್ತೆಯಾಗಿದ್ದು, ಸ್ಥಳೀಯ ಜನರಲ್ಲಿ ತೀವ್ರ ಆತಂಕವನ್ನು ಮೂಡಿಸಿದೆ. ಅವಲಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ನಿರ್ಜನ ಪ್ರದೇಶದಲ್ಲಿ ನೂರಕ್ಕೂ ಹೆಚ್ಚು ಜಿಲೆಟಿನ್ ಕಡ್ಡಿಗಳು ಹಾಗೂ ವೈಯರ್‌ಗಳು ಪತ್ತೆಯಾಗಿವೆ. ಸ್ಥಳಕ್ಕೆ ಧಾವಿಸಿದ



ಅವಲಹಳ್ಳಿ ಪೊಲೀಸರು, ಎಲ್ಲಾ ಜಿಲೆಟಿನ್ ಕಡ್ಡಿಗಳನ್ನು ತಮ್ಮ ವಶಕ್ಕೆ ಪಡೆದುಕೊಂಡಿದ್ದಾರೆ. ಈ ಭಾಗದಲ್ಲಿ ಕಲ್ಲು ಕ್ವಾರಿಗಳು ಹಾಗೂ ಬಂಡೆಗಳನ್ನು ಒಡೆಯುವ ಉದ್ಯಮಗಳು ಹೆಚ್ಚಾಗಿ ಇರುವುದರಿಂದ ಯಾರಾದರೂ ಅಕ್ರಮವಾಗಿ ಇವುಗಳನ್ನು ತಂದು ಸಂಗ್ರಹಿಸಿಟ್ಟಿದ್ದರೇ ಎಂಬ ಶಂಕೆ ವ್ಯಕ್ತವಾಗಿದೆ.

# ಸಾರಿಗೆ ಪ್ರಯಾಣಿಕರಿಗೆ ಸ್ಮಾರ್ಟ್ ಕಾರ್ಡ್ ಭಾಗ್ಯ-ಬೈರತಿ ಸುರೇಶ್




ಬೆಂಗಳೂರು : ರಾಜ್ಯದ ಮೂರು ಕೋಟಿಗೂ ಅಧಿಕ ಸಾರಿಗೆ ಪ್ರಯಾಣಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಿಸುವ ಬೃಹತ್ ಯೋಜನೆಯನ್ನು ರಾಜ್ಯ ಸರ್ಕಾರ ಹಮ್ಮಿಕೊಂಡಿದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ಪ್ರಕಟಿಸಿದ್ದಾರೆ. ಕೆಎಸ್ಆರ್‌ಟಿಸಿ ಕೇಂದ್ರ ಕಚೇರಿಯಲ್ಲಿ ಸೋಮವಾರ ನಾಲ್ಕೂ ಸಾರಿಗೆ ನಿಗಮಗಳ ಹಿರಿಯ ಅಧಿಕಾರಿಗಳೊಂದಿಗೆ ಸಚಿವರಾಗಿ ಅಧಿಕಾರ ವಹಿಸಿಕೊಂಡ ನಂತರ ಮೊದಲ ಬಾರಿಗೆ ನಡೆಸಿದ ಮಹತ್ವದ ಸಭೆಯಲ್ಲಿ ಅವರು ಈ ನಿರ್ಧಾರ ಕೈಗೊಂಡಿದ್ದಾರೆ. ಈ ಮೂಲಕ ಒಟ್ಟಾರೆಯಾಗಿ ರಾಜ್ಯದ ಸುಮಾರು 3 ಕೋಟಿ ಜನರಿಗೆ ಸ್ಮಾರ್ಟ್ ಕಾರ್ಡ್ ತಲುಪಿಸುವ ಗುರಿ ಹೊಂದಲಾಗಿದೆ.

# ದರ್ಗಾ ಇದ್ದ ತಕ್ಷಣ ಅದು ವಕ್ಫ್ ಆಸ್ತಿಯಾಗಲ್ಲ: ಮದ್ರಾಸ್ ಹೈಕೋರ್ಟ್

ಚೆನ್ನೈ : ಯಾವುದೇ ಒಂದು ಸ್ಥಳದಲ್ಲಿ ಕೇವಲ ದರ್ಗಾ ಅಥವಾ ಮುಸ್ಲಿಂ ಧಾರ್ಮಿಕ ಸಂಸ್ಥೆ ಅಸ್ತಿತ್ವದಲ್ಲಿದೆ ಎಂದ ಮಾತ್ರಕ್ಕೆ ಅದು ಸ್ವಯಂ ಚಾಲಿತವಾಗಿ ವಕ್ಫ್ ಆಸ್ತಿಯಾಗುವುದಿಲ್ಲ ಎಂದು ಮದ್ರಾಸ್ ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ. ವಕ್ಫ್ ಕಾಯ್ದೆಯಡಿ ಯಾವುದೇ ಆಸ್ತಿಯ ಕಾನೂನುಬದ್ಧ ಸ್ಥಿತಿಯನ್ನು ಮೊದಲು



ಸಾಬೀತುಪಡಿಸದೆ, ವಕ್ಫ್ ಮಂಡಳಿಯು ಅದರ ಮೇಲಿನ ಅಧಿಕಾರವನ್ನು ತನ್ನ ಕೈಗೆ ತೆಗೆದುಕೊಳ್ಳಲು ಸಾಧ್ಯವಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ. ಚೆನ್ನೈನ ಹಳೆಯ ಐತಿಹಾಸಿಕ ದರ್ಗಾವನ್ನು ವಕ್ಫ್ ಆಸ್ತಿ ಎಂದು ಘೋಷಿಸಿ ತಮಿಳುನಾಡು ವಕ್ಫ್ ಮಂಡಳಿ ಹೊರಡಿಸಿದ್ದ ನಿರ್ಣಯವನ್ನು ಹೈಕೋರ್ಟ್ ರದ್ದುಗೊಳಿಸಿದೆ.

# ಮೀನಾಕ್ಷಿ ನಟರಾಜನ್ ನಾಮಪತ್ರ ತಿರಸ್ಕೃತ :ಬಿಜೆಪಿ ವಿರುದ್ಧ ವಾಗ್ದಾಳಿ

ಮಧ್ಯಪ್ರದೇಶ : ತೆಲಂಗಾಣದ ನ್ಯಾಯಾಲಯದ ಪ್ರಕರಣವೊಂದನ್ನು ಅಫಿಡವಿಟ್‌ನಲ್ಲಿ ಮರೆಮಾಚಿದ್ದಾರೆ ಎಂಬ ಕಾರಣ ನೀಡಿ ಮಧ್ಯಪ್ರದೇಶದ ರಾಜ್ಯಸಭಾ ಚುನಾವಣೆಯ ನಾಮಪತ್ರ ತಿರಸ್ಕೃತಗೊಂಡ ಬೆನ್ನಲ್ಲೇ, ಕಾಂಗ್ರೆಸ್ ನಾಯಕಿ ಮೀನಾಕ್ಷಿ ನಟರಾಜನ್ ಅವರು ಬಿಜೆಪಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಬಿಜೆಪಿ ಅಧಿಕಾರ ದುರ್ಬಳಕೆ ಮಾಡಿಕೊಂಡು ಚುನಾವಣಾ ಪ್ರಕ್ರಿಯೆಯನ್ನು ತನ್ನಿಷ್ಟದಂತೆ ತಿರುಗಿಸುತ್ತಿದೆ ಎಂದು ಅವರು ಗಂಭೀರ ಆರೋಪ ಮಾಡಿದ್ದಾರೆ. ಅಗತ್ಯ ಸಂಖ್ಯಾಬಲ ಇಲ್ಲದಿದ್ದರೂ ಬಿಜೆಪಿ ಮೂರನೇ ಅಭ್ಯರ್ಥಿಯನ್ನು ಕಣಕ್ಕಿಳಿಸಿದಾಗಲೇ ಈ ಇಡೀ ವಿವಾದದ ಸಂಚು ಆರಂಭವಾಗಿತ್ತು ಎಂದು ದೂರಿದ್ದಾರೆ.



# ಟಿಎಂಸಿಯಲ್ಲಿ ಬಿರುಕಿನ ವದಂತಿ ತಳ್ಳಿಹಾಕಿದ ಪಕ್ಷ

ಕೋಲ್ಕತ್ತ : ತೃಣಮೂಲ ಕಾಂಗ್ರೆಸ್‌ನಲ್ಲಿ (TMC) ಭಾರಿ ಬಿರುಕು ಉಂಟಾಗಿದ್ದು, 20 ಸಂಸದರು ಬಿಜೆಪಿ ನೇತೃತ್ವದ ಎನ್‌ಡಿಎ ಒಕ್ಕೂಟಕ್ಕೆ ಬೆಂಬಲ ನೀಡಲಿದ್ದಾರೆ ಎಂಬ ವರದಿಗಳನ್ನು ಮಮತಾ ಬ್ಯಾನರ್ಜಿ ನೇತೃತ್ವದ ಪಕ್ಷವು ಸಂಪೂರ್ಣವಾಗಿ ತಳ್ಳಿಹಾಕಿದೆ. ಈ ವರದಿಗಳು ಕೇವಲ ವದಂತಿಗಳಾಗಿದ್ದು,



ವೈರಲ್ ಆಗಿರುವ ಸಂಸದರ ಪಟ್ಟಿ ನಕಲಿ (Fake) ಎಂದು ಟಿಎಂಸಿ ನಾಯಕರು ಹೇಳಿದ್ದಾರೆ. 20ಕ್ಕೂ ಹೆಚ್ಚು ಟಿಎಂಸಿ ಸಂಸದರು ಈಗಾಗಲೇ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರಿಗೆ ಪತ್ರ ಬರೆದಿದ್ದಾರೆ ಎಂಬ ವರದಿಗಳ ಬೆನ್ನಲ್ಲೇ ಟಿಎಂಸಿ ಈ ಸ್ಪಷ್ಟನೆ ನೀಡಿದೆ.

# ರಾಹುಲ್ ಗಾಂಧಿ ವಿರುದ್ಧ ವಿವಾದಾತ್ಮಕ ಪೋಸ್ಟರ್ ವಾರ್!



ನವದೆಹಲಿ : ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಕರೆಯಲಾಗಿದ್ದ 'ಇಂಡಿಯಾ' ಮೈತ್ರಿಕೂಟದ ಪ್ರಮುಖ ನಾಯಕರ ಮಹತ್ವದ ಸಭೆಗೆ ಕೆಲವೇ ಗಂಟೆಗಳ ಮೊದಲು ಭಾರಿ ರಾಜಕೀಯ ಹೈಡ್ರಾಮಾ ನಡೆದಿದೆ. ಮೈತ್ರಿಕೂಟದ ನಾಯಕರು ಒಗ್ಗಟ್ಟು ಪ್ರದರ್ಶಿಸಲು ಒಂದೆಡೆ ಸೇರುತ್ತಿರುವಾಗಲೇ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಗುರಿಯಾಗಿಸಿಕೊಂಡು ದೆಹಲಿಯಾದ್ಯಂತ ವಿವಾದಾತ್ಮಕ ಪೋಸ್ಟರ್‌ಗಳನ್ನು ಅಂಟಿಸಿರುವುದು ತೀವ್ರ ಸಂಚಲನ ಸೃಷ್ಟಿಸಿದೆ. ಈ ಹಠಾತ್ ಬೆಳವಣಿಗೆಯು ವಿರೋಧ ಪಕ್ಷಗಳ ಮಹಾಮೈತ್ರಿಯ ಒಗ್ಗಟ್ಟಿನ ಬಗ್ಗೆ ದೇಶಾದ್ಯಂತ ಹಲವು ಪ್ರಶ್ನೆಗಳು ಮತ್ತು ಸಂಶಯಗಳು ಮೂಡುವಂತೆ ಮಾಡಿದೆ.

# ಅಣ್ಣಾಮಲೈ ಹೊಸ ಆಂದೋಲನಕ್ಕೆ ಜನರ ಬೆಂಬಲ!

ಚೆನ್ನೈ : ತಮಿಳುನಾಡು ಬಿಜೆಪಿ ರಾಜ್ಯಾಧ್ಯಕ್ಷ ಹುದ್ದೆಗೆ ಹಾಗೂ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ ಕೇವಲ ಇಪ್ಪತ್ತನಾಲ್ಕು ಗಂಟೆಗಳ ಅವಧಿಯಲ್ಲಿ, ಮಾಜಿ ಐಪಿಎಸ್ ಅಧಿಕಾರಿ ಕೆ. ಅಣ್ಣಾಮಲೈ ಅವರ ಹೊಸ ರಾಜಕೀಯ ಆಂದೋಲನಕ್ಕೆ ಬರೋಬ್ಬರಿ ಹದಿನೈದು ಲಕ್ಷಕ್ಕೂ ಹೆಚ್ಚು ಜನರು ಕೈಜೋ



ಡಿಸುವ ಮೂಲಕ ತಮಿಳುನಾಡು ರಾಜಕೀಯದಲ್ಲಿ ಹೊಸ ಇತಿಹಾಸ ಸೃಷ್ಟಿಸಿದ್ದಾರೆ. ತಮ್ಮ ಮುಂದಿನ ರಾಜಕೀಯ ನಡೆ ಯಾವುದೇ ವೈಯಕ್ತಿಕ ಸ್ವಾರ್ಥಕ್ಕಾಗಿ ಅಲ್ಲ, ಬದಲಿಗೆ ಯುವಕರು ಮತ್ತು ಸಾಮಾನ್ಯ ಜನರಿಗಾಗಿ ಎಂದು ಅಣ್ಣಾಮಲೈ ಅವರು ಸ್ಪಷ್ಟವಾಗಿ ಘೋಷಿಸಿದ್ದಾರೆ.

# ಜೋಜಿಲಾ ಸುರಂಗದ ಅಂತಿಮ ಸ್ಫೋಟ ಯಶಸ್ವಿ

ಶ್ರೀನಗರ : ಭಾರತದ ಹೆದ್ದಾರಿ ಮತ್ತು ಮೂಲ ಸೌಕರ್ಯ ಇತಿಹಾಸದಲ್ಲೇ ಅತ್ಯಂತ ಮಹತ್ವದ ಮೈಲಿಗಲ್ಲೊಂದು ಸ್ಥಾಪನೆಯಾಗಿದೆ. ಸಮುದ್ರ ಮಟ್ಟದಿಂದ ಬರೋಬ್ಬರಿ 11,500 ಅಡಿ (ಸುಮಾರು 3,535 ಮೀಟರ್) ಎತ್ತರ ದಲ್ಲಿ ನಿರ್ಮಾಣವಾಗುತ್ತಿರುವ, ವಿಶ್ವದ ಅತಿ ಉದ್ದದ ಸಿಂಗಲ್-ಟ್ಯೂಬ್ ದ್ವಿಮುಖ ರಸ್ತೆ ಸುರಂಗವಾದ 'ಜೋಜಿಲಾ ಸುರಂಗ'ದ ಅಂತಿಮ ಹಂತದ ಸ್ಫೋಟ (ಬ್ರೇಕ್‌ಥ್ರೂ), ಕೇಂದ್ರ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ರಿಮೋಟ್ ಬಟನ್ ಒತ್ತುವ ಮೂಲಕ ಈ ಐತಿಹಾಸಿಕ ಅಂತಿಮ ಸ್ಫೋಟವನ್ನು ನಡೆಸಿದರು.





ಕರಾವಳಿ ತರಂಗಿಣಿ

# ಸಿನಿ ತರಂಗಿಣಿ

## ಚಲನಚಿತ್ರ ನಿರ್ದೇಶಕರ ಸಂಘಕ್ಕೆ ನೃತ್ಯ ನಿರ್ದೇಶಕರ ಸಂಘದ ಪದಾಧಿಕಾರಿಗಳ ಭೇಟಿ..



ಕರ್ನಾಟಕ ಚಲನಚಿತ್ರ ನೃತ್ಯ ನಿರ್ದೇಶಕರ ಮತ್ತು ನೃತ್ಯ ಕಲಾವಿದರ ಸಂಘಕ್ಕೆ ಇತ್ತೀಚೆಗೆ ಆಯ್ಕೆಯಾಗಿರುವ ಅಧ್ಯಕ್ಷರಾದ ಮುರಳಿ ವಿ. ಉಪಾಧ್ಯಕ್ಷರಾದ ಕುಮಾರ್ ಎಸ್(ಬಲದೇವ್, ನಾಗೇಂದ್ರ, ಪ್ರಧಾನ ಕಾರ್ಯದರ್ಶಿಗಳಾದ ರಾಮಮೂರ್ತಿ ಜಿ, ಸಹ ಕಾರ್ಯದರ್ಶಿ ಸಂತೋಷ್ ಎಸ್, ಲಕ್ಷ್ಮಣ್ ಜಿ, ಖಜಾಂಚಿಗಳಾದ ಸತೀಸ್ ಎಸ್ ಮತ್ತು ಕಾರ್ಯಕಾರಿ ಸಮಿತಿ ಸದಸ್ಯರು ಇಂದು ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘಕ್ಕೆ ಆಗಮಿಸಿ ನಿರ್ದೇಶಕರ ಸಂಘದ ಅಧ್ಯಕ್ಷರಾದ ಎನ್ನಾರ್ ಕೆ ವಿಶ್ವನಾಥ್ ಅವರನ್ನು ಗೌರವಿಸಿ ನಂತರ ಚಿತ್ರರಂಗದ ಅಭಿವೃದ್ಧಿ ಕುರಿತು ಚರ್ಚಿಸಿದರು. ಈ ಸಂದರ್ಭದಲ್ಲಿ ಮಾತಾಡಿದ ನಿರ್ದೇಶಕರ ಸಂಘದ ಅಧ್ಯಕ್ಷರಾದ ಎನ್ನಾರ್ ಕೆ ವಿಶ್ವನಾಥ್ ಅವರು ಎರಡು ಸಂಘದ ಬಾಂಧವ್ಯದ ಕುರಿತು ಮತ್ತು ಚಿತ್ರರಂಗದ ಏಳಿಗೆಯ ಕುರಿತು ಮಾತಾನಾಡಿ ಚಿತ್ರರಂಗದ ಬೆಳವಣಿಗೆಯ ದೃಷ್ಟಿಯಿಂದ ಜೊತೆ ಸೇರಿ ಕಾರ್ಯನಿರ್ವಹಿಸೋಣವೆಂದು ಹೇಳಿದರು. ನಿರ್ದೇಶಕರ ಸಂಘದ ಉಪಾಧ್ಯಕ್ಷರಾದ ಟಾಪ್‌ಸ್ಟಾರ್ ರೇಣು ಕುಮಾರ್, ಕಾರ್ಯದರ್ಶಿಗಳಾದ ಆರ್ ಶಿವಶಂಕರ್ ಮತ್ತು ಕಾರ್ಯಕಾರಿ ಸಮಿತಿ ಸದಸ್ಯರಾದ ಜಿತೇಂದ್ರ್ ಜೋಸ್ಸೆಮನ್ ಅವರುಗಳು ಭಾಗಿಯಾಗಿ ನೂತನವಾಗಿ ಆಯ್ಕೆಯಾಗಿರುವ ನೃತ್ಯ ನಿರ್ದೇಶಕರ ಸಂಘದ ಪದಾದಧಿಕಾರಿಗಳಿಗೆ ಶುಭ ಹಾರೈಸಿದರು. ಇದೇ ಸಂದರ್ಭದಲ್ಲಿ ನಿರ್ದೇಶಕರ ಸಂಘದ ವತಿಯಿಂದ ಹೊಸದಾಗಿ ಚುನಾಯಿತರಾಗಿರುವ ನೃತ್ಯ ನಿರ್ದೇಶಕರ ಸಂಘದ ಪದಾಧಿಕಾರಿಗಳನ್ನು ಮತ್ತು ಕಾರ್ಯಕಾರಿ ಸಮಿತಿ ಸದಸ್ಯರನ್ನು ಗೌರವಿಸಲಾಯಿತು.



## ದೊಡ್ಮನ್ಸ ಪವರ್ ಪ್ಯಾಕ್ಡ್ ಟ್ರೇಲರ್ ರಿಲೀಸ್..



ವೇದಿಕ್ ಕಾಸ್ಮೋಸ್ ಬ್ಯಾನರ್ ಅಡಿಯಲ್ಲಿ , ಶರತ್ ಕೃಷ್ಣ ನಿರ್ದೇಶನದಲ್ಲಿ ಶರತ್ ಕೃಷ್ಣ ಮತ್ತು ರೇಷ್ಮಾ, ಶಿಲ್ಪಾ ಮುಖ್ಯ ಪಾತ್ರದಲ್ಲಿ ನಟಿಸಿರುವ "ದೊಡ್ಮನ್ಸ" ಚಿತ್ರದ ಟ್ರೇಲರ್ ರಿಲೀಸ್ ಆಗಿದೆ. ಪಕ್ಕಾ ಆಕ್ಷನ್ ಪ್ಯಾಕ್ಡ್ ಸಿನಿಮಾ ಅನ್ನೋದನ್ನ ಈ ಟ್ರೇಲರ್ ತೋರಿಸಿಕೊಟ್ಟಿದೆ. ಹೀರೋ ಮಾಸ್ ಅವತಾರ, ಫೈಟ್ ಸೀನ್ ಗಳು ಟ್ರೇಲರ್‌ನಲ್ಲಿಯೇ ಮಾಸ್ ಪ್ರಿಯರ ಗಮನ ಸೆಳೆದಿದೆ. ಇನ್ನು ಒಂದು ಇನ್ನೊಸೆಂಟ್ ಲವ್ ಕೂಡ ಅನಾವರಣವಾಗಿದೆ. ಸಿನಿಮಾ ಬಗ್ಗೆ ಒಂದೊಳ್ಳೆ ಭರವಸೆಯನ್ನ ಈ ಟ್ರೇಲರ್ ಮೂಡಿಸಿದೆ. ನಟ, ನಿರ್ದೇಶಕ ಶರತ್ ಕೃಷ್ಣ ಮಾತನಾಡಿ, ದೊಡ್ಮನ್ಸ ಎಲ್ಲಿ ಆರಂಭ ಮಾಡಿ, ಇಲ್ಲಿ ನಿಂತಿದ್ದೀವಿ. ಈ ದೊಡ್ಮನ್ಸ ಒಂದು ವಾರ್ಕ್ ವಾಡಿನೆ ಮುಂದೆ ಸಾಗುತ್ತೆ ಎಂದಿದ್ದಾರೆ. ಸಿನಿಮಾದಲ್ಲಿ ಬಾಲ ರಾಜ್ವಾಡಿ, ಹುಲಿ ಕಾರ್ತಿಕ್ ಸೇರಿದಂತೆ ಹಲವರು ನಟಿಸಿದ್ದಾರೆ. ಇದೇ ತಿಂಗಳ 19ರಂದು ಸಿನಿಮಾ ರಾಜ್ಯಾದ್ಯಂತ ತೆರೆಗೆ ಬರುತ್ತಿದೆ.

## ಪಕ್ಕಾ ಎಂಟರ್ಟೈನ್ಮೆಂಟ್ 'ಗೋಲ್ಮಾಲ್ ಗ್ಯಾಂಗ್'



ಸಿನಿಮಾ ಅಂದ್ರೆನೆ ಮನರಂಜನೆ. ಆ ಮನರಂಜನೆಗಾಗಿಯೇ ಜನ ಕಾಯ್ತಾ ಇರುತ್ತಾರೆ. ನಕ್ಕು ಮನಸ್ಸನ್ನ ಕೂಲ್ ಆಗಿಸಿಕೊಳ್ಳುವಂತ ಸಿನಿಮಾವೊಂದು ಸಿದ್ಧವಾಗುತ್ತಿದೆ. ಅದರ ಹೆಸರೇ ಗೊಲ್ಮಾಲ್ ಗ್ಯಾಂಗ್. ಇದೀಗ ಚಿತ್ರದ ಟೀಸರ್ ರಿಲೀಸ್ ಆಗಿದ್ದು, ಸಿನಿಮಾದ ಮೇಲೆ ಭರವಸೆ ಮೂಡಿಸಿದೆ. ಶಾಂತ್ವು ಯೂನಿವರ್ಸಲ್ ಪಿಕ್ಚರ್ ಬ್ಯಾನರ್‌ನಡಿ ಸತೀಶ್‌ಚಂದ್ರ ಅವರು ನಿರ್ಮಾಣ ಮಾಡಿದ್ದಾರೆ. ನಿರ್ದೇಶಕ ಶಿವಕುಮಾರ್ ಮಾತನ್ನಾಡುತ್ತಾ, ಈ ಸಿನಿಮಾದಲ್ಲಿ 16 ಜನ ಕಲಾವಿದರಿದ್ದಾರೆ. ಆ ಎಲ್ಲಾ ಪಾತ್ರಕ್ಕೂ ಜೀವವಿದೆ. ಗೋಲ್ಮಾಲ್ ಮಾಡುವಂತ ಕ್ಯಾರೆಕ್ಟರ್ ಜಾಸ್ತಿ. ಅದಕ್ಕೆ ಆ ಟೈಟಲ್ ಇಟ್ಟಿದ್ದು ಎಂದಿದ್ದಾರೆ. ನಿರ್ಮಾಪಕರು ಮಾತಾನಾಡಿ ನಿರುದ್ಯೋಗದ ಸಮಸ್ಯೆಗಾಗಿ ಏನಾದರೂ ಮಾಡಬೇಕು, ಕೆಲಸ ಕೊಡಬೇಕೂಂತ ಹೊರಟು ಒಂದು ಸಿನಿಮಾ ಮಾಡಿದ್ದೇವೆ ಎಂದರು.









KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021